ದಿನಾಂಕಃ 05-07-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆಃ</u>- ಅರ್ಜಿದಾರರ ಪರವಾಗಿ ಶ್ರೀ.ಬಿ.ಕೆ.ಆರ್. ವಕೀಲರಿಂದಃ-**

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳೆಲ್ಲಾ ಸರಿಯಾಗಿವೆ ಮತ್ತು ಸತ್ಯವಾಗಿವೆ ಎಂದು ಪ್ರಮಾಣೀಕರಿಸಿ ನನ್ನ ಸಹಿ ಮಾಡಿರುತ್ತೇನೆ.

ನನ್ನ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು, ಪ್ರತಿವಾದಿಯರು ನೀಡಲಾದ ಒಂದು ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.2 ಎಂದು, ಪ್ರತಿವಾದಿಯರು ದಿನಾಂಕಃ 28-02-2023 ರಂದು ನನಗೆ ನೀಡಲಾದ ನೊಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು, ನನ್ನ ಮಗನ ಮರಣ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು, ನನ್ನ, 2 ನೇ ಅರ್ಜಿದಾರರ ಹಾಗೂ ನನ್ನ ಮಗ ಮೃತ ಭರತ್ ಕುಮಾರನ ಮೂರು ಆಧಾರ್ ಕಾರ್ಡನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.5 ರಿಂದ 7 ಎಂದು, ಹೊಸದಿಗಂತ ದಿನ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.8 ಎಂದು ಗುರುತಿಸಲಾಯಿತು.

ಆದ್ದರಿಂದ ಈ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

**<u>ಪಾಟೀ ಸವಾಲುಃ- ಎದುರುದಾರರ ಪರ ವಕೀಲರಿಂದಃ-</u>**

ಈ ಹಂತದಲ್ಲಿ ಎದುರುದಾರರು ಏಕಪಕ್ಷೀಯವಾದ್ದರಿಂದ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ